ಸೋಮವಾರ,09.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 139

Digital Varthe Kannada Daily
Volume 01 - Issue 139
Monday, 09.02.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

ಗ್ಯಾಸ್ ಗೀಸರ್ ಲೀಕ್‌ನಿಂದ ಪತಿ ಸಾವು; ದುಃಖ ತಾಳಲಾರದೆ ಪತ್ನಿಯ ಆತ್ಮಹತ್ಯೆ

ನೆಲಮಂಗಲ: ಸುಮಾರು 20 ವರ್ಷಗಳ ಕಾಲ ಪರಸ್ಪರ ಅತೀವ ಪ್ರೀತಿ, ನಂಬಿಕೆ ಹಾಗೂ ಸಂಸಾರದ ಜವಾಬ್ದಾರಿಯನ್ನು ಹಂಚಿ ಕೊಂಡು ಸುಖವಾಗಿ ಜೀವನ ನಡೆಸುತ್ತಿದ್ದ ದಂಪತಿ ದುರಂತಕರ ಅಂತ್ಯ ಕಂಡಿರುವ ಹೃದಯವಿದ್ರಾವಕ ಘಟನೆ ನೆಲಮಂಗಲ ನಗರದಲ್ಲಿ ನಡೆದಿದೆ. ಈ ದುರ್ಘಟನೆಯಲ್ಲಿ ರಾಜು (48) ಮತ್ತು ಅವರ ಪತ್ನಿ ಮೀನಾ (42) ಪ್ರಾಣ ಕಳೆದುಕೊಂಡಿದ್ದಾರೆ.

ಲಭ್ಯವಾದ ಮಾಹಿತಿಯಂತೆ, ರಾಜು ಮನೆಗೆಲಸದ ಬಳಿಕ ಸ್ನಾನಕ್ಕಾಗಿ ಮನೆಯ ಬಾತ್‌ರೂಮಿಗೆ ತೆರಳಿದ್ದರು. ಈ ವೇಳೆ ಬಾತ್‌ರೂಮಿನಲ್ಲಿ ಅಳವಡಿಸಲಾಗಿದ್ದ ಗ್ಯಾಸ್ ಗೀಸರ್‌ನಿಂದ ಅನಿಲ ಲೀಕ್ ಆಗಿದ್ದು, ಅದರಿಂದ ಉಸಿರಾಟಕ್ಕೆ ತೀವ್ರ ತೊಂದರೆ ಉಂಟಾಗಿ ಅವರು ಅಸ್ವಸ್ಥರಾದರು. ಪರಿಸ್ಥಿತಿಯನ್ನು ನಿಭಾಯಿಸಲು ಸಾಧ್ಯವಾಗದೆ ರಾಜು ಅಲ್ಲಿಯೇ ಪ್ರಾಣ ಬಿಟ್ಟಿದ್ದಾರೆ ಎನ್ನಲಾಗಿದೆ. ಈ ಆಕಸ್ಮಿಕ ಸಾವು ಮನೆಯವರನ್ನು ಆಘಾತಕ್ಕೆ ಒಳಪಡಿಸಿದೆ.

ಇನ್ನು ಪತಿಯ ಅಕಾಲಿಕ ಸಾವಿನ ಸುದ್ದಿ ತಿಳಿಯು ತ್ತಿದ್ದಂತೆಯೇ, ದುಃಖವನ್ನು ತಾಳಲಾರದೆ ಪತ್ನಿ ಮೀನಾ ಕೂಡ ತೀವ್ರ ಮಾನಸಿಕ ಆಘಾತಕ್ಕೆ ಒಳಗಾಗಿದ್ದಾರೆ. ಮೂಲತಃ ತುಮಕೂರು ಜಿಲ್ಲೆಯ ಕುಣಿಗಲ್ ನಿವಾಸಿಗಳಾಗಿದ್ದ ಈ ದಂಪತಿ, ಉದ್ಯೋಗ ನಿಮಿತ್ತ ನೆಲಮಂಗಲ ನಗರದಲ್ಲಿ ತಮ್ಮ ಮಗನೊಂದಿಗೆ ವಾಸವಾಗಿದ್ದರು. ಮೀನಾ ಬೆಂಗಳೂರಿನ ಖಾಸಗಿ ಬ್ಯಾಂಕ್‌ನಲ್ಲಿ ಉದ್ಯೋಗಿಯಾಗಿದ್ದು, ಪತಿಯ ಸಾವಿನ ಸುದ್ದಿ ಬಂದ ತಕ್ಷಣ ಅವರು ನೆಲಮಂಗಲದ ಜಕ್ಕಸಂದ್ರದಲ್ಲಿರುವ ಮನೆ ಕಡೆಗೆ ಹೊರಟಿದ್ದರು.

ಆದರೆ ಪತಿಯ ಅಗಲುವಿಕೆಯ ಸುದ್ದಿ ಕೇಳಿದ ನಂತರವೇ ತೀವ್ರವಾಗಿ ಮನೋವೈಕಲ್ಯಕ್ಕೆ ಒಳಗಾಗಿದ್ದ ಮೀನಾ, ಮೃತ ಗಂಡನ ಮುಖವನ್ನು ನೋಡುವುದಕ್ಕೂ ಮುನ್ನವೇ ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ. ಅವರು ತಮ್ಮ ಕುಟುಂಬಕ್ಕಾಗಿ ನಿರ್ಮಿಸುತ್ತಿದ್ದ ಮನೆಯ ಸಮೀಪದಲ್ಲಿದ್ದ ಮರಕ್ಕೆ ನೇಣು ಬಿಗಿದುಕೊಂಡು ಪ್ರಾಣ ತ್ಯಜಿಸಿರುವುದು ಇನ್ನಷ್ಟು ಕರುಣಾಜನಕವಾಗಿದೆ.

ಆತ್ಮಹತ್ಯೆಗೆ ಮುನ್ನ ಮೀನಾ ಡೆತ್ ನೋಟ್ ಬರೆದಿರುವುದು ಬೆಳಕಿಗೆ ಬಂದಿದೆ. ಆ ಡೆತ್ ನೋಟ್‌ನಲ್ಲಿ, "ಗಂಡನಿಲ್ಲದೆ ನಾನು ಒಂದು ನಿಮಿಷವೂ ಬದುಕಲು ಸಾಧ್ಯವಿಲ್ಲ. ನಾನು ಹೋಗುವ ಮುನ್ನ ಯಾರ್ಯಾರಿಗೆ ಏನೇನು ಕೊಡಬೇಕೋ ಅದನ್ನೆಲ್ಲಾ ಕೊಟ್ಟುಬಿಡಿ. ಎಲ್ಲರೂ ನನ್ನನ್ನು ಕ್ಷಮಿಸಿಬಿಡಿ" ಎಂದು ಮನಕಲಕುವ ಪದಗಳಲ್ಲಿ ಉಲ್ಲೇಖಿಸಿದ್ದಾರೆ. ಈ ಸಾಲುಗಳು ಅವರ ಮನಸ್ಸಿನ ನೋವು ಮತ್ತು ಪತಿಯ ಮೇಲಿನ ಅವ್ಯಾಜ ಪ್ರೀತಿಯನ್ನು ತೋರಿಸುತ್ತಿವೆ.

20 ವರ್ಷಗಳ ಹಿಂದೆ ಜೀವನದ ಪಯಣ ಆರಂಭಿಸಿದ್ದ ಈ ಜೋಡಿ, ಬದುಕಿನಲ್ಲಿ ಮಾತ್ರವಲ್ಲ ಸಾವಲ್ಲೂ ಒಂದಾಗಿರುವುದು ಕುಟುಂಬಸ್ಥರು ಹಾಗೂ ಸ್ಥಳೀಯರನ್ನು ಕಣ್ಣೀರಿನಲ್ಲಿ ಮುಳುಗುವಂತೆ ಮಾಡಿದೆ. ದಂಪತಿಯ ದುರಂತ ಅಂತ್ಯ ಕುಟುಂಬಕ್ಕೆ ಬರಸಿಡಿಲಿನಂತೆ ಬಡಿದಿದ್ದು, ಸಂಬಂಧಿಕರು ಹಾಗೂ ಪರಿಚಿತರ ಆಕ್ರಂದನ ಮುಗಿಲು ಮುಟ್ಟಿದೆ.

ಘಟನೆಗೆ ಸಂಬಂಧಿಸಿದಂತೆ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಾನೂನು ಪ್ರಕ್ರಿಯೆಯಂತೆ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಮೃತದೇಹಗಳನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ. ಈ ದುರ್ಘಟನೆ ಗೃಹಗಳಲ್ಲಿ ಗ್ಯಾಸ್ ಗೀಸರ್ ಬಳಕೆಯ ಸುರಕ್ಷತೆ ಹಾಗೂ ಮಾನಸಿಕ ಆರೋಗ್ಯದ ಮಹತ್ವದ ಬಗ್ಗೆ ಮತ್ತೆ ಎಚ್ಚರಿಕೆ ನೀಡುವಂತಾಗಿದೆ.

ಪ್ರಿಯತಮೆಯ ಲಗ್ನ ಪತ್ರಿಕೆ ನೋಡಿ ಬಾಡಿ ಬಿಲ್ಡರ್ ಆತ್ಮಹತ್ಯೆ

ಬೆಂಗಳೂರು: ಪ್ರೀತಿಸಿದ ಯುವತಿ ತನಗೆ ಕೈಕೊಟ್ಟು ಬೇರೆಯವನೊಂದಿಗೆ ಮದುವೆಯಾ ಗುತ್ತಿದ್ದಾಳೆಂಬ ಸುದ್ದಿಯನ್ನು ಸಹಿಸಲಾಗದೆ ಬೆಂಗಳೂರಿನ ಖ್ಯಾತ ಬಾಡಿ ಬಿಲ್ಡರ್ ನೇಣಿಗೆ ಶರಣಾಗಿರುವ ಘಟನೆ ಮಹಾಲಕ್ಷ್ಮಿ ಲೇಔಟ್‌ನಲ್ಲಿ ನಡೆದಿದೆ.

ಆತ್ಮಹತ್ಯೆ ಮಾಡಿಕೊಂಡ ಯುವಕ ನನ್ನು ಕಿರಣ್ (26) ಎಂದು ಗುರುತಿಸಲಾಗಿದೆ. ಕಿರಣ್ ಹಲವು ವರ್ಷಗಳಿಂದ ಜಿಮ್ ಟ್ರೈನರ್ ಆಗಿ ಕೆಲಸ ಮಾಡುತ್ತಿದ್ದರು ಮತ್ತು ಬಾಡಿ ಬಿಲ್ಡಿಂಗ್ ಕ್ಷೇತ್ರದಲ್ಲಿ ಸಕ್ರಿಯರಾಗಿದ್ದರು. ಕಿರಣ್, ಕಳೆದ ಮೂರು ವರ್ಷಗಳಿಂದ ಯುವತಿಯೊಬ್ಬಳನ್ನು ಪ್ರೀತಿಸುತ್ತಿದ್ದರು ಎನ್ನಲಾಗಿದೆ.

ಮುಂಬರುವ ಫೆಬ್ರವರಿ 14 ರ 'ವ್ಯಾಲೆಂಟೈನ್ಸ್ ಡೇ' (ಪ್ರೇಮಿಗಳ ದಿನ) ಸಂದರ್ಭದಲ್ಲಿ ತನ್ನ ಪ್ರೇಯಸಿಗೆ ವಿಶೇಷ ಉಡುಗೊರೆಯನ್ನು ನೀಡಿ ಸರ್ಪ್ರೈಸ್ ಕೊಡಲು ಕಿರಣ್ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದರು. ಆದರೆ ತಾನು ಪ್ರಾಣಕ್ಕಿಂತ ಹೆಚ್ಚಾಗಿ ಪ್ರೀತಿಸಿದ ಹುಡುಗಿ, ಬೇರೊಬ್ಬನ ಜೊತೆ ಮದುವೆ ಯಾಗಲು ಸಿದ್ಧಳಾಗುತ್ತಿದ್ದಳು.

ಯುವತಿಯ ಮದುವೆ ಬೇರೊಬ್ಬನೊಂದಿಗೆ ನಿಶ್ಚಯವಾಗಿದ್ದು ಮಾತ್ರವಲ್ಲದೆ, ಆಕೆ ಕಿರಣ್‌ಗೆ ತನ್ನ ಮದುವೆಯ ಲಗ್ನಪತ್ರಿಕೆ ಮತ್ತು ಮದುವೆಗಾಗಿ ಖರೀದಿಸಿದ ಹೊಸ ಸೀರೆಯನ್ನು ತೋರಿಸಿದ್ದಾಳೆ. ಇದರಿಂದ ತೀವ್ರ ಮನನೊಂದಿದ್ದ ಕಿರಣ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಮನನೊಂದ ಕಿರಣ್ ಮಹಾಲಕ್ಷ್ಮಿ ಲೇಔಟ್‌ನಲ್ಲಿರುವ ತನ್ನ ಮನೆಗೆ ಬಂದು ಯಾರೂ ಇಲ್ಲದ ಸಮಯದಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿದ ಮಹಾಲಕ್ಷ್ಮಿ ಲೇಔಟ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ.

ಮಗನನ್ನು ಕಳೆದುಕೊಂಡ ಪೋಷಕರು ಈಗ ಯುವತಿಯ ಕುಟುಂಬದ ವಿರುದ್ಧ ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ಮೃತ ಕಿರಣ್ ತಾಯಿಯ ಆರೋಪದಂತೆ, ಕಿರಣ್ ಪ್ರೀತಿಸುತ್ತಿದ್ದ ಯುವತಿಯ ಪೋಷಕರು ಸುಮಾರು 50 ಲಕ್ಷ ರೂಪಾಯಿ ಸಾಲ ಹೊಂದಿದ್ದರು. ಈ ವಿಚಾರ ಕಿರಣ್‌ಗೆ ತಿಳಿದಾಗ, ನಿಮ್ಮ ಎಲ್ಲಾ ಸಾಲವನ್ನು ನಾನೇ ತೀರಿಸುತ್ತೇನೆ, ನನ್ನ ಪ್ರೇಯಸಿಯನ್ನು ನನಗೆ ಕೊಟ್ಟು ಮದುವೆ ಮಾಡಿ ಎಂದು ಭರವಸೆ ನೀಡಿದ್ದನಂತೆ. ಕಳೆದ ಎಂಟು ತಿಂಗಳ ಹಿಂದೆಯೇ ಯುವತಿ ಕಿರಣ್ ಮನೆಗೆ ಬಂದು ಮದುವೆಯಾಗುವ ಇಚ್ಛೆ ವ್ಯಕ್ತಪಡಿಸಿದ್ದಳು. ತನಗಿಂತ ಎರಡು ವರ್ಷ ದೊಡ್ಡವಳಾಗಿದ್ದರೂ ಕಿರಣ್ ಆಕೆಯನ್ನು ಮನಸ್ಫೂರ್ತಿಯಾಗಿ ಪ್ರೀತಿಸಿ ಮದುವೆಯಾಗಲು ಇಚ್ಛಿಸಿದ್ದ.

ಕಳೆದ ಒಂದು ವಾರದಲ್ಲಿ ಯುವತಿಯ ಕುಟುಂಬದವರು ಆಕೆಗೆ ಬೇರೊಬ್ಬನೊಂದಿಗೆ ಮದುವೆ ನಿಶ್ಚಯ ಮಾಡಿದ್ದರು. ಹಣ ಪಡೆದು ಈಗ ಮತ್ತೊಬ್ಬನ ಜೊತೆ ಮದುವೆಯಾಗಿ ನನ್ನ ಮಗನಿಗೆ ಮೋಸ ಮಾಡಿದ್ದಾರೆ ಎಂದು ಕಿರಣ್ ಪೋಷಕರು ಆರೋಪ ಮಾಡಿದ್ದಾರೆ.

ನಿನ್ನೆ ಸಂಜೆ ಕಿರಣ್ ತನ್ನ ತಾಯಿಯ ಬಳಿ ಹೋಗಿ ಬಿಳಿ ಹಾಳೆ ಮತ್ತು ಪೆನ್ ಕೇಳಿದ್ದಾನೆ. ಮಗನ ವರ್ತನೆಯಿಂದ ಅನುಮಾನಗೊಂಡ ತಾಯಿ, ಯಾಕಪ್ಪಾ ವೈಟ್ ಪೇಪರ್ ? ಎಂದು ಪ್ರಶ್ನಿಸಿದಾಗ, ಕಿರಣ್ ಹೆದರಬೇಡಮ್ಮ, ಸುಮ್ಮನೆ ಫೈನಾನ್ಸ್ ಲೆಕ್ಕ ಬರೆಯಬೇಕು ಅಷ್ಟೇ ಎಂದು ಸುಳ್ಳು ಹೇಳಿ ಸಮಾಧಾನಪಡಿಸಿದ್ದಾನೆ. ಆದರೆ ಅದೇ ಹಾಳೆಯಲ್ಲಿ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿ ಕೊಂಡಿದ್ದಾನೆ.

ಕಿರಣ್ ಬರೆದಿಟ್ಟಿರುವ ಡೆತ್ ನೋಟ್ ಈಗ ಪೊಲೀಸರ ವಶದಲ್ಲಿದ್ದು, ಅದರಲ್ಲಿ ಪ್ರೀತಿಸಿದ ಯುವತಿ ಹಾಗೂ ಆಕೆಯ ಕುಟುಂಬಸ್ಥರ ಹೆಸರುಗಳನ್ನು ಉಲ್ಲೇಖಿಸಲಾಗಿದೆ ಎಂದು ತಿಳಿದುಬಂದಿದೆ. ಮಗನ ಸಾವಿಗೆ ಈ ಯುವತಿಯೇ ನೇರ ಕಾರಣ ಎಂದು ಪೋಷಕರು ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಇಂದು ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಯಲಿದ್ದು, ಪೊಲೀಸರು ತನಿಖೆಯನ್ನು ತೀವ್ರಗೊಳಿಸಿದ್ದಾರೆ.

ಎಣ್ಣೆ ಏಟಲ್ಲಿ ಕ್ಯಾಬ್‌ಗೆ ಸ್ಕೂಟಿ ಗುದ್ದಿ ಯುವತಿಯರ ರಂಪಾಟ

ಬೆಂಗಳೂರು: ಮದ್ಯದ ಅಮಲಿನಲ್ಲಿ ವಾಹನ ಚಲಾಯಿಸುತ್ತಿದ್ದ ದ್ವಿಚಕ್ರ ವಾಹನ ಸವಾರ ಯುವತಿಯರು ಕಾರುಗಳು ಹಾಗೂ ಬೈಕ್‌ಗಳಿಗೆ ಡಿಕ್ಕಿ ಹೊಡೆದು ಗಲಾಟೆ ನಡೆಸಿದ ಘಟನೆ ಬೆಂಗಳೂರು ನಗರದ ಬನ್ನೇರುಘಟ್ಟ ರಸ್ತೆಯ ಹುಳಿಮಾವು ಪ್ರದೇಶದಲ್ಲಿ ನಡೆದಿದೆ. ಖಾಸಗಿ ಕ್ಯಾಬ್ ಚಾಲಕನೊಂದಿಗೆ ವಾಗ್ವಾದಕ್ಕಿಳಿದ ಯುವತಿಯರು ಆತನ ಮೇಲೆ ಹಲ್ಲೆ ನಡೆಸಲು ಯತ್ನಿಸಿದ ರೆನ್ನಲಾಗಿದ್ದು, ಪ್ರಶ್ನಿಸಿದ ಸಾರ್ವಜನಿಕ ರೊಂದಿಗೆ ಸಹ ಅಸಭ್ಯ ಪದಪ್ರಯೋಗ ಮತ್ತು ವರ್ತನೆ ತೋರಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಆಗಮಿಸಿದರೂ, ಯುವತಿಯರ ಗದ್ದಲ ಮತ್ತು ಹೈಡ್ರಾಮಾ ಕೆಲಕಾಲ ಮುಂದುವರಿದಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಲಭ್ಯವಾದ ಮಾಹಿತಿಯಂತೆ, ಸ್ನೇಹಿತರೊಂದಿಗೆ ಖಾಸಗಿ ಹೋಟೆಲ್‌ಗೆ ಭೇಟಿ ನೀಡಿ ಮದ್ಯಪಾನ ಮಾಡಿದ್ದ ಜೆ.ಪಿ.ನಗರ ಮತ್ತು ಕೋರಮಂಗಲ ಮೂಲದ ಇಬ್ಬರು ಯುವತಿಯರು ವಾಪಸ್ ಹೋಗುವ ಸಂದರ್ಭದಲ್ಲಿ, ಹಿಂದಿನಿಂದ ಕ್ಯಾಬ್‌ಗೆ ಸ್ಕೂಟಿಯಿಂದ ಡಿಕ್ಕಿ ಹೊಡೆದಿದ್ದಾರೆ. ಡಿಕ್ಕಿಯಿಂದ ಕ್ಯಾಬ್‌ಗೆ ಹಾನಿಯಾದ ಹಿನ್ನೆಲೆಯಲ್ಲಿ ಕ್ಯಾಬ್ ಚಾಲಕ ಅಹ್ಮದ್ ವಿಚಾರಿಸಿದಾಗ, ಯುವತಿಯರು ನಿಂದನೆ ಮಾಡಿ ಅಲ್ಲಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದಾರೆ ಎನ್ನಲಾಗಿದೆ. ಈ ಸಂದರ್ಭದಲ್ಲಿ ಸ್ಥಳೀಯರು ಮಧ್ಯಪ್ರವೇಶಿಸಿ ಅವರನ್ನು ತಡೆದಿದ್ದಾರೆ.

ಕೈಗೆ ಚೈನ್ ಸುತ್ತಿಕೊಂಡು ಹಲ್ಲೆ ನಡೆಸಿದ ಆರೋಪ: ಘಟನೆ ತೀವ್ರಗೊಳ್ಳುತ್ತಿದ್ದಂತೆ, ಯುವತಿಯರು ಕೈಗೆ ಚೈನ್ ಸುತ್ತಿಕೊಂಡು ಕ್ಯಾಬ್ ಚಾಲಕನ ಮೇಲೆ ಹಲ್ಲೆ ನಡೆಸಿದ್ದು, ಮುಖ, ಕೈ ಹಾಗೂ ಬೆನ್ನಿನ ಭಾಗಕ್ಕೆ ಹೊಡೆದಿದ್ದಾರೆ ಎಂದು ಆರೋಪಿಸಲಾಗಿದೆ. ಜೊತೆಗೆ ಅಸಭ್ಯ ಸನ್ನೆಗಳು ಮತ್ತು ನಿಂದನಾತ್ಮಕ ಪದಗಳಿಂದ ಸಾರ್ವಜನಿಕರನ್ನೂ ಅವಮಾನಿಸಿದ್ದಾರೆ ಎನ್ನಲಾಗಿದೆ. ಗದ್ದಲ ಹೆಚ್ಚಾಗುತ್ತಿದ್ದಂತೆ ಸ್ಥಳೀಯರು ಇಬ್ಬರು ಯುವತಿಯರನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ನಂತರ ಲೀಸಾ ಮತ್ತು ಮ್ಯಾಥ್ಯೂ ಎಂಬ ಯುವತಿಯರ ವಿರುದ್ಧ ಹುಳಿಮಾವು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

'ಕೀ ತೆಗೆಯಲು ಹೋದಾಗ ಹಲ್ಲೆ': ಘಟನೆ ಕುರಿತು ಪ್ರತಿಕ್ರಿಯಿಸಿದ ಕ್ಯಾಬ್ ಚಾಲಕ ಅಹ್ಮದ್, "ನಾನು ಕಸ್ಟಮರ್ ಪಿಕ್‌ಅಪ್‌ಗೆ ಹೋಗುತ್ತಿದ್ದಾಗ ಹಿಂದಿನಿಂದ ಬಂದು ಸ್ಕೂಟಿ ನನ್ನ ಕ್ಯಾಬ್‌ಗೆ ಟಚ್ ಮಾಡಿದೆ. ಗಾಡಿಗೆ ಹಾನಿಯಾಗಿದ್ದರಿಂದ ಅದಕ್ಕೆ ಪರಿಹಾರ ಕೇಳಿದ್ದೇನೆ. ಆಗ ಅವರು ಗಾಡಿ ಸ್ಟಾರ್ಟ್ ಮಾಡಿಕೊಂಡು ಅಲ್ಲಿಂದ ಹೋಗಲು ಪ್ರಯತ್ನಿಸಿದರು. ಸ್ಥಳೀಯರು ಸೇರಿ ಅವರನ್ನು ತಡೆದರು. ನಾನು ಕೀ ತೆಗೆದುಕೊಳ್ಳಲು ಹೋದಾಗ ನನ್ನ ಮೇಲೆ ಏಕಾಏಕಿ ಹಲ್ಲೆ ನಡೆಸಿದರು. ಕೈಗೆ ಚೈನ್ ಸುತ್ತಿಕೊಂಡು ಮುಖ, ಕೈ ಮತ್ತು ಬೆನ್ನಿನ ಮೇಲೆ ದಾಳಿ ಮಾಡಿದರು," ಎಂದು ತಿಳಿಸಿದ್ದಾರೆ.

ಈ ವೇಳೆ ಸ್ಥಳೀಯರು ಒಗ್ಗಟ್ಟಾಗಿ ಕ್ಯಾಬ್ ಚಾಲಕನಿಗೆ ಬೆಂಬಲ ನೀಡಿ ಪರಿಸ್ಥಿತಿಯನ್ನು ನಿಯಂತ್ರಿಸಿದ್ದು, ಬಳಿಕ ಪೊಲೀಸರಿಗೆ ದೂರು ನೀಡಲಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಘಟನೆಗೆ ಸಂಬಂಧಿಸಿದಂತೆ ತನಿಖೆ ಮುಂದುವರಿಸಿದ್ದಾರೆ. ಈ ಘಟನೆ ಮದ್ಯಪಾನದ ಬಳಿಕ ವಾಹನ ಚಾಲನೆ ಮಾಡುವ ಅಪಾಯ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಶಾಂತಿ ಸೃಷ್ಟಿಸುವ ವರ್ತನೆಯ ಗಂಭೀರತೆಯನ್ನು ಮತ್ತೆ ಒತ್ತಿ ಹೇಳುವಂತಾಗಿದೆ.

ಕನಕಪುರ ಶ್ರೀನಿವಾಸ್ ಮಾತಾಡಿದ್ದು ತುಂಬಾ ತಪ್ಪು, ನಾವು ಕ್ಷಮಿಸೋದೇ ಇಲ್ಲ

ನಿರ್ಮಾಪಕ ಕನಕಪುರ ಶ್ರೀನಿವಾಸ್ ಅವರು ಇತ್ತೀಚೆಗೆ ನಡೆದ ಸುದ್ದಿಗೋಷ್ಠಿಯಲ್ಲಿ ಅನೇಕರ ಬಗ್ಗೆ ನಾಲಿಗೆ ಹರಿಬಿಟ್ಟಿದ್ದರು. ಡಿಸಿಎಂ ಡಿ.ಕೆ ಶಿವಕುಮಾರ್, ಧ್ರುವ ಸರ್ಜಾ, ಎ.ಪಿ. ಅರ್ಜುನ್, ಜೋಗಿ ಪ್ರೇಮ್, ಪುನೀತ್ ರಾಜ್‌ಕುಮಾರ್ ಸೇರಿದಂತೆ ಹಲವರ ವಿರುದ್ಧ ಅವರು ಅಶ್ಲೀಲವಾಗಿ ಮಾತನಾಡಿದ್ದರು. ಅದಕ್ಕೆ ಚಿತ್ರರಂಗದಲ್ಲಿ ಖಂಡನೆ ವ್ಯಕ್ತವಾಗಿದೆ.

ಈ ಕುರಿತು ದೊಡ್ಡಬಳ್ಳಾಪುರದಲ್ಲಿ ರೋರಿಂಗ್ ಸ್ಟಾರ್ ಶ್ರೀಮುರಳಿ ಮಾಧ್ಯಮದವರಿಗೆ ತಮ್ಮದೇ ರೀತಿಯಲ್ಲಿ ಪ್ರತಿಕ್ರಿಯೆ ನೀಡಿದರು... ನಮಗೆಲ್ಲಾ ದೊಡ್ಡವರು ಡಾ.ರಾಜ್ ಕುಮಾರ್ ಅವರು ಒಂದು ಮಾತು ಹೇಳಿದ್ದರು, ಏನೆಂದರೆ ನಿರ್ಮಾಪಕರು ಅನ್ನದಾತರು ಅಂತಾ. ಅವರ ಮಾತನ್ನು ಚಾಚೂ ತಪ್ಪದೇ ನಿರ್ಮಾಪಕರನ್ನು ಗೌರವದಿಂದ ಕಾಣುತ್ತೇವೆ. ಕಲಾವಿದರ ಹತ್ತಿರ ಕೆಲಸ ಮಾಡಿಸಿಕೊಳ್ಳುವಾಗ ಒಂದು ರೀತಿ, ಕೆಲಸ ಮುಗಿದ ನಂತರ ಒಂದು ರೀತಿ, ಯಾವುದೋ ಒಂದು ಘಟನೆ ಇಟ್ಟುಕೊಂಡು ಬೇಜವಾಬ್ದಾರಿ ತನದಿಂದ ಮಾತನಾಡಿರುವುದು ನನಗೆ ಇಷ್ಟವಾಗಿಲ್ಲ. ಕಲಾವಿದರು ಎಂದ ಮೇಲೆ ಕಲಾವಿದರೆ. ಕಲಾವಿದರಿಗೆ ಮನೆ, ಸಂಸಾರ, ಜವಾಬ್ದಾರಿ ಎಲ್ಲಾ ಇರುತ್ತೆ. ಇಲ್ಲದೇ ಇರುವವರ ಬಗ್ಗೆ ಮಾತಾಡೋದು, ಇನ್ನಾರದೋ ಬಗ್ಗೆ ಮಾತಾಡೋದು ಇದೆನ್ನೆಲ್ಲಾ ಏನಕ್ಕೆ ಮಾಡಬೇಕು. ನಾವೆಲ್ಲಾ ಕೆಲಸ ಮಾಡ್ತಿರೋದು ತಾಯಿ ಭುವನೇಶ್ವರಿಗೋಸ್ಕರ. ಕಷ್ಟ ಯಾರಿಗೆ ಬರಲ್ಲ, ನಮಗೂ ಕಷ್ಟ ಇದೆ, ಇಗಲೂ ಕಷ್ಟ ಇದೆ. ಆ ಕಷ್ಟಾನ ಪರಿಹಾರ ಮಾಡಿಕೊಂಡು ಹೋಗ್ತಾನೆ ಇದಿವಿ. ಕಷ್ಟ ಇದೆ ಅಂತಾ ಹೇಳಿ ಬೇರೆಯ ವರನ್ನ ಅವಮಾನ ಮಾಡುತ್ತಿದ್ದೀವಾ ಎಂದು ಹೇಳಿದರು. ನಿರ್ಮಾಪಕರು ಹಿರಿಯರು, ಹಿರಿಯರ ಸ್ಥಾನದಲ್ಲಿದ್ದಾರೆ.. ಸ್ವಲ್ಪ ಯೋಚನೆ ಮಾಡಿ ಮಾತಾಡಬೇಕು. ಬಹಳ ಸೂಕ್ಷ್ಮ ವಿಚಾರಗಳು, ವ್ಯಕ್ತಿಗಳ ಬಗ್ಗೆ ಮಾತನಾಡಿದ್ದಾರೆ.. ಇದು ಬಹಳ ತಪ್ಪಾಗಿ ಕಾಣುತ್ತಿದೆ. ಅದೇರೀತಿ ತಪ್ಪಾಗಿ ಕೇಳುತ್ತಿದೆ.. ಇದು ಇಲ್ಲಿಗೆ ನಿಲ್ಲಬೇಕು. ಚಿತ್ರರಂಗದ ಹಿರಿಯರು ಮುಂದೆ ಬಂದು ಕೂಡಲೇ ಇದನ್ನ ಇಲ್ಲಿಗೆ ನಿಲ್ಲಿಸಬೇಕು..ಇದು ಕೂಡು ಕುಟುಂಬ ಅವಿಭಕ್ತ ಕುಟುಂಬ ಇದ್ದ ಹಾಗೇ, ಈ ಕೂಡು ಕುಟುಂಬ ಹೊಡೀಬಾರದು, ನಾವೆಲ್ಲಾ ಒಗ್ಗಟ್ಟಿನಿಂದ ಇರಬೇಕು ಎಂದರು...

ಯಾವ ನಟರೂ ಅಷ್ಟೋಂದು ಕೆಟ್ಟವರಲ್ಲ. ನಟರ ಬಗ್ಗೆ ಏಕೆ ಹಾಗೆ ಮಾತಾಡಬೇಕಿತ್ತು, ಏನಕ್ಕೆ ಆ ರೀತಿ ಮಾತಾಡಬೇಕಿತ್ತು. ಇದು ಕೇಳಕ್ಕೆ ಏಕೋ ಚೆನ್ನಾಗಿಲ್ಲ. ನೋಡಕ್ಕೂ ಚೆನ್ನಾಗಿಲ್ಲ ಅದಕ್ಕೆ ಕೇಳಲ್ಲ, ನೋಡಿಲ್ಲ. ಕೆಲವೊಂದು ಸೂಕ್ಷ್ಮ ವಿಚಾರಗಳು, ಸೂಕ್ಷ್ಮ ವ್ಯಕ್ತಿಗಳ ಬಗ್ಗೆ ಗಂಭೀರವಾಗಿ, ಆಲೋಚನೆ ಮಾಡಿ ಮಾತಾಡು ವಿಷಯಗಳನ್ನ ಬಹಳ ದುರುಪಯೋಗ ಪಡಿಸಿ ಕೊಂಡು ಮಾತನಾಡಿರು ವುದು ಖಂಡನೀಯ ಎಂ

ಕಾಡಾನೆ ಹಿಂಡು ದಾಳಿ: ರೈತ ಬಲಿ ಗ್ರಾಮಸ್ಥರಿಂದ ಪ್ರತಿಭಟನೆ

ಚಾಮರಾಜನಗರ: ಜಮೀನಿನಲ್ಲಿ ಕಾವಲು ಕಾಯುತ್ತಿದ್ದ ರೈತನ ಮೇಲೆ 9 ಕಾಡಾನೆಗಳ ಹಿಂಡು ಏಕಾಏಕಿ ದಾಳಿ ನಡೆಸಿದ ಪರಿಣಾಮ ರೈತ ಬಲಿಯಾಗಿರುವ ದುರ್ಘಟನೆ ಚಾಮರಾಜನಗರ ಜಿಲ್ಲೆಯ ಗಡಿ ಭಾಗದಲ್ಲಿರುವ ತಮಿಳುನಾಡಿನ ಕರಳವಾಡಿ ಗ್ರಾಮದಲ್ಲಿ ನಡೆದಿದೆ. ಕಾಡಾನೆಗಳ ಆಟ್ಟಹಾಸಕ್ಕೆ ಕರಳವಾಡಿ ಗ್ರಾಮದ ಮಹೇಶ್ ಎಂಬ ರೈತ ಪ್ರಾಣ ಕಳೆದುಕೊಂಡಿದ್ದು, ಈ ಘಟನೆ ಇಡೀ ಗ್ರಾಮವನ್ನು ಶೋಕ ಮತ್ತು ಆತಂಕದಲ್ಲಿ ಮುಳುಗಿಸಿದೆ. ಮಾಹಿತಿ ತಿಳಿದ ಕೂಡಲೇ ಸತ್ಯಮಂಗಲ ಟೈಗರ್ ರಿಸರ್ವ್ ಅರಣ್ಯಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ನಡೆದಿದ್ದೇನು? ಮೃತ ರೈತ ಮಹೇಶ್ ತಮ್ಮ ಜಮೀನಿನಲ್ಲಿ ಬೆಳೆ ರಕ್ಷಣೆಗಾಗಿ ರಾತ್ರಿ ಕಾವಲು ಕಾಯುತ್ತಿದ್ದರು. ಇದೇ ವೇಳೆ ಅರಣ್ಯ ಪ್ರದೇಶದಿಂದ ಏಕಾಏಕಿ 9 ಕಾಡಾನೆಗಳ ಹಿಂಡು ಜಮೀನಿನೊಳಗೆ ನುಗ್ಗಿ ದಾಳಿ ನಡೆಸಿದೆ. ಮಹೇಶ್ ಪ್ರಾಣ ಉಳಿಸಿಕೊಳ್ಳಲು ಪ್ರಯತ್ನಿಸಿದರೂ, ಆನೆಗಳ ಹಿಂಡು ಆತನ ಮೇಲೆ ನಿರ್ದಯವಾಗಿ ದಾಳಿ ಮಾಡಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಅಕ್ಕಪಕ್ಕದ ಜಮೀನಿನವರು ಶಬ್ದ ಮಾಡಿ ಕೂಗಾಡಿ ಆನೆಗಳನ್ನು ಓಡಿಸಲು ಪ್ರಯತ್ನಿಸಿದರೂ, ಕಾಡಾನೆಗಳ ಹಿಂಡು ಸ್ಥಳವನ್ನು ಬಿಟ್ಟಿಲ್ಲ. ಪರಿಣಾಮ ಗಜಪಡೆಯ ಆಟ್ಟಹಾಸಕ್ಕೆ ಮಹೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಗ್ರಾಮಸ್ಥರ ಪ್ರಕಾರ, ಕಳೆದ ಮೂರು ರಿಂದ ನಾಲ್ಕು ತಿಂಗಳಿಂದ ಈ ಗಡಿ ಪ್ರದೇಶದಲ್ಲಿ ಕಾಡಾನೆಗಳ ನಿರಂತರ ಓಡಾಟ ಕಂಡುಬರುತ್ತಿದ್ದು, ರೈತರು ಮತ್ತು ಕಾರ್ಮಿಕರು ಭಯದ ವಾತಾವರಣದಲ್ಲಿ ಜೀವನ ನಡೆಸುತ್ತಿದ್ದಾರೆ. ಈ ಕುರಿತು ಅರಣ್ಯ ಇಲಾಖೆಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ಶಾಶ್ವತ ಪರಿಹಾರ ದೊರಕಿಲ್ಲ ಎಂಬ ಆಕ್ರೋಶ ಗ್ರಾಮಸ್ಥರಲ್ಲಿ ಇದೆ.

ಈ ದುರ್ಘಟನೆಯಿಂದ ರೊಚ್ಚಿಗೆದ್ದ ಗ್ರಾಮಸ್ಥರು ರಸ್ತೆ ತಡೆ ನಡೆಸಿ ಪ್ರತಿಭಟನೆಗೆ ಇಳಿದಿದ್ದಾರೆ. ಕಾಡಾನೆ ಸಮಸ್ಯೆಗೆ ತಕ್ಷಣ ಸ್ಪಂದಿಸಿ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು, ಗಡಿ ಗ್ರಾಮಗಳ ರೈತರಿಗೆ ರಕ್ಷಣಾ ವ್ಯವಸ್ಥೆ ಒದಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಅರಣ್ಯ ಇಲಾಖೆ ಹಾಗೂ ಜಿಲ್ಲಾಡಳಿತದಿಂದ ಸ್ಪಷ್ಟ ಪರಿಹಾರ ಸಿಗುವವರೆಗೂ ಹೋರಾಟ ಮುಂದುವರಿಸುವುದಾಗಿ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ಒಟ್ಟಿನಲ್ಲಿ, ಕಾಡಾನೆಗಳ ನಿರಂತರ ದಾಳಿ ಗಡಿ ಗ್ರಾಮಗಳ ರೈತರ ಬದುಕನ್ನು ಅಸ್ತವ್ಯಸ್ತಗೊಳಿಸಿದ್ದು, ಮತ್ತಷ್ಟು ಜೀವಹಾನಿ ಸಂಭವಿಸುವ ಮೊದಲು ತುರ್ತು ಕ್ರಮ ಕೈಗೊಳ್ಳಬೇಕೆಂಬ ಒತ್ತಡ ಹೆಚ್ಚಾಗಿದೆ.

ಹೋಂವರ್ಕ್ ಮಾಡದಿದ್ದಕ್ಕೆ ಬಾಸುಂಡೆ ಬರುವ ಹಾಗೆ ಹೊಡೆದ ಶಿಕ್ಷಕ

ಲಖನೌ: ಕೇವಲ ಹೋಂವರ್ಕ್ ಪೂರ್ಣಗೊಳಿಸಿಲ್ಲ ಎಂಬ ಕ್ಷುಲ್ಲಕ ಕಾರಣಕ್ಕೆ ಎರಡನೇ ತರಗತಿಯ ಎಳೆಯ ಬಾಲಕನ ಮೇಲೆ ಇಂಗ್ಲಿಷ್ ಶಿಕ್ಷಕನೊಬ್ಬ ಅಮಾನುಷವಾಗಿ ಹಲ್ಲೆ ನಡೆಸಿರುವ ಘಟನೆ ಉತ್ತರ ಪ್ರದೇಶದ ಗೊಂಡಾ ಜಿಲ್ಲೆಯಲ್ಲಿ ನಡೆದಿದೆ.

ಗೊಂಡಾ ಜಿಲ್ಲೆಯ ಕರ್ನೈಲಗಂಜ್ ಪ್ರದೇಶದ ಎಂಆರ್‌ಜಿ ಎಂಬ ಖಾಸಗಿ ಶಾಲೆಯಲ್ಲಿ ಈ ಘಟನೆ ಸಂಭವಿಸಿದೆ. ಆರೋಪಿ ಶಿಕ್ಷಕನನ್ನು ಪ್ರಖರ್ ಸಿಂಗ್ ಎಂದು ಗುರುತಿಸಲಾಗಿದ್ದು, ಈತ ಶಾಲೆಯಲ್ಲಿ ಇಂಗ್ಲಿಷ್ ವಿಷಯವನ್ನು ಬೋಧಿಸುತ್ತಿದ್ದನು. ಎರಡನೇ ತರಗತಿಯಲ್ಲಿ ಓದುತ್ತಿರುವ ಬಾಲಕ ಇಂಗ್ಲಿಷ್ ಹೋಂವರ್ಕ್ ಮಾಡಿರಲಿಲ್ಲ. ಇದನ್ನೇ ನೆಪವಾಗಿರಿಸಿಕೊಂಡ ಪ್ರಖರ್ ಸಿಂಗ್, ಮಗುವಿನ ಮೇಲೆ ವಿಕೃತಿ ಮೆರೆದಿದ್ದಾನೆ. ಬಾಲಕನ ಕಾಲುಗಳ ಮೇಲೆ ಪದೇ ಪದೆ ಬಲವಾಗಿ ಹೊಡೆದ ಪರಿಣಾಮ, ಕಾಲುಗಳು ಊದಿಕೊಂಡಿದ್ದು ತೀವ್ರ ರಕ್ತಗಾಯಗಳಾಗಿವೆ.

ಶಾಲೆಯಿಂದ ಮನೆಗೆ ಮರಳಿದ ಬಾಲಕ ಕುಂಟುತ್ತಾ ನಡೆಯುತ್ತಿರುವುದನ್ನು ಕಂಡು ತಂದೆ-ತಾಯಿ ಗಾಬರಿಗೊಂಡಿದ್ದಾರೆ. ಮಗುವಿನ ಪ್ಯಾಂಟ್ ಮೇಲಕ್ಕೆತ್ತಿ ನೋಡಿದಾಗ ಪೋಷಕರು ಬೆಚ್ಚಿಬಿದ್ದಿದ್ದಾರೆ. ಮಗುವಿನ ಎರಡು ಕಾಲುಗಳ ಮೇಲೆ ನೂರಾರು ಗಾಯದ ಗುರುತುಗಳಿದ್ದವು. ನೋವಿನಿಂದ ಮಗು ನರಳುತ್ತಿತ್ತು. ತಕ್ಷಣವೇ ಶಾಲಾ ಆಡಳಿತ ಮಂಡಳಿಯನ್ನು ಸಂಪರ್ಕಿಸಿದ ಪೋಷಕರು, ನಂತರ ಮಗುವನ್ನು ಆಸ್ಪತ್ರೆಗೆ ದಾಖಲಿಸಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ಘಟನೆ ವರದಿಯಾಗುತ್ತಿದ್ದಂತೆ ಎಚ್ಚೆತ್ತ ಶಾಲಾ ಪ್ರಾಂಶುಪಾಲರು, ಆರೋಪಿ ಶಿಕ್ಷಕ ಪ್ರಖರ್ ಸಿಂಗ್‌ನನ್ನು ಸೇವೆಯಿಂದ ತಕ್ಷಣವೇ ವಜಾಗೊಳಿಸಿದ್ದಾರೆ. ಇತ್ತ ಪೊಲೀಸರು ಕೂಡ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದಾರೆ. ಕರ್ನೈಲಗಂಜ್ ಸರ್ಕಲ್ ಆಫೀಸರ್ ಅಭಿಷೇಕ್ ದಬಾಣ ಅವರ ಪ್ರಕಾರ, ಭಾರತೀಯ ನ್ಯಾಯ ಸಂಹಿತೆಯ (ಬಿಎನ್) ಸೆಕ್ಷನ್ 115(2), 351(3) ಮತ್ತು 352ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಆರೋಪಿಯ ಬಂಧನಕ್ಕೆ ಬಲೆ ಬೀಸಲಾಗಿದೆ.

6 ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಹತ್ಯೆ

ಪಾಟ್ನಾ: ಬಿಹಾರದ ದರ್ಭಾಂಗಾ ಜಿಲ್ಲೆಯಲ್ಲಿ ಆರು ವರ್ಷದ ಬಾಲಕಿಯ ಮೇಲೆ ದುಷ್ಕರ್ಮಿಗಳು ಲೈಂಗಿಕ ದೌರ್ಜನ್ಯ ಎಸಗಿ ಹತ್ಯೆ ಮಾಡಿರುವ ಅಘಾತಕಾರಿ ಘಟನೆ ಸಂಭವಿಸಿದೆ. ಈ ಅಮಾನುಷ ಕೃತ್ಯವು ಇಡೀ ಪ್ರದೇಶವನ್ನು ಕಂಬನಿಯಲ್ಲಿ ಮುಳುಗಿಸಿದ್ದು, ಬಾಲಕಿಯ ಕುಟುಂಬಸ್ಥರು ಹಾಗೂ ಸ್ಥಳೀಯರಲ್ಲಿ ತೀವ್ರ ಆಕ್ರೋಶ ಮತ್ತು ಆತಂಕ ಉಂಟಾಗಿದೆ.

ಪೊಲೀಸರ ಮಾಹಿತಿ ಪ್ರಕಾರ, ಈ ದುರ್ಘಟನೆ ದರ್ಭಾಂಗಾ ಜಿಲ್ಲೆಯ ವಿಶ್ವವಿದ್ಯಾಲಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ಬಾಲಕಿಯ ಶವ ರಕ್ತದ ಮಡುವಿನಲ್ಲಿ ಪತ್ತೆಯಾಗಿದ್ದು, ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವ ಶಂಕೆ ವ್ಯಕ್ತವಾಗಿದೆ. ಬಾಲಕಿ ಇತರ ಇಬ್ಬರು ಮಕ್ಕಳೊಂದಿಗೆ ಸಮೀಪದ ಕೊಳದ ಬಳಿ ಆಟವಾಡುತ್ತಿದ್ದ ವೇಳೆ ಏಕಾಏಕಿ ನಾಪತ್ತೆಯಾಗಿದ್ದಳು. ಸಂಜೆ ಹೊತ್ತಿಗೆ ಹುಡುಕಾಟ ನಡೆಸಿದ ಕುಟುಂಬಸ್ಥರು, ನಿರ್ಜನ ಪ್ರದೇಶದಲ್ಲಿ ಆಕೆಯ ಮೃತದೇಹವನ್ನು ಕಂಡುಬಂದಿದ್ದು, ಆ ದೃಶ್ಯ ಕುಟುಂಬದವರನ್ನು ಕಣ್ಣೀರಿನಲ್ಲಿ ಮುಳುಗುವಂತೆ ಮಾಡಿದೆ.

ಬಾಲಕಿಯ ಕುಟುಂಬಸ್ಥರ ಆರೋಪದಂತೆ, ಆಕೆಯ ನೆರೆಹೊರೆಯವರೇ ಈ ಕೃತ್ಯಕ್ಕೆ ಕಾರಣರಾಗಿದ್ದು, ಬಾಲಕಿಯನ್ನು ನಿರ್ಜನ ಸ್ಥಳಕ್ಕೆ ಕರೆದೊಯ್ದು ಮೊದಲು ಲೈಂಗಿಕ ದೌರ್ಜನ್ಯ ಎಸಗಿ ನಂತರ ಕೊಲೆ ಮಾಡಿದ್ದಾರೆ. ಈ ಆರೋಪದ ಮೇರೆಗೆ ಪೊಲೀಸರು ತಕ್ಷಣ ಕ್ರಮ ಕೈಗೊಂಡಿದ್ದು, ಸಂಬಂಧಪಟ್ಟ ನೆರೆಹೊರೆಯವರನ್ನು ವಶಕ್ಕೆ ಪಡೆದು ಬಂಧಿಸಲಾಗಿದೆ ಎಂದು ತಿಳಿದುಬಂದಿದೆ.

ಘಟನೆಯ ಗಂಭೀರತೆಯನ್ನು ಗಮನಿಸಿ, ವಿಧಿವಿಜ್ಞಾನ ತಂಡವು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಪ್ರಕರಣದ ಕುರಿತು ಮಾತನಾಡಿದ ಜಿಲ್ಲಾ ಹಿರಿಯ ಪೊಲೀಸ್ ಅಧಿಕಾರಿ ಜಗನಾಥ್ ರೆಡ್ಡಿ, "ಮರಣೋತ್ತರ ಪರೀಕ್ಷೆಯ ವರದಿ ಬಂದ ನಂತರವೇ ಸಾವಿಗೆ ನಿಖರ ಕಾರಣವನ್ನು ದೃಢಪಡಿಸಬಹುದು. ತನಿಖೆಯನ್ನು ಅತ್ಯಂತ ಗಂಭೀರವಾಗಿ ಕೈಗೊಳ್ಳಲಾಗಿದೆ," ಎಂದು ತಿಳಿಸಿದ್ದಾರೆ. ಮರಣೋತ್ತರ ಪರೀಕ್ಷೆಗಾಗಿ ಬಾಲಕಿಯ ಶವವನ್ನು ಪಾಟ್ನಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ರವಾನಿಸಲಾಗಿದೆ.

ಬಿಹಾರದಲ್ಲಿ ಇತ್ತೀಚಿನ ದಿನಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ವಿರುದ್ಧ ನಡೆಯುತ್ತಿರುವ ಅಪರಾಧ ಪ್ರಕರಣಗಳು ಗಂಭೀರ ಚರ್ಚೆಗೆ ಕಾರಣವಾಗಿವೆ. ಕಳೆದ ತಿಂಗಳು ಪೂರ್ಣಿಯಾ ಜಿಲ್ಲೆಯಲ್ಲಿ ಸ್ಥಳೀಯ ಪೊಲೀಸ್ ಠಾಣೆಯಿಂದ ಕೇವಲ 300 ಮೀಟರ್ ದೂರದಲ್ಲಿದ್ದ ಕೋಣೆಯಲ್ಲಿ 5ಳ ವರ್ಷದ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆದ ಪ್ರಕರಣ ಭಾರೀ ಆಕ್ರೋಶಕ್ಕೆ ಕಾರಣವಾಗಿತ್ತು. ಅದೇ ರೀತಿ, ಮತ್ತೊಂದು ಘಟನೆಯಲ್ಲಿ ನೀಟ್ ವಿದ್ಯಾರ್ಥಿನಿಯೊಬ್ಬಳು ಬೇಗ ಹಾಕಿದ ಕೋಣೆಯಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಆಸ್ಪತ್ರೆಗೆ ಸಾಗಿಸಿದ ಬಳಿಕ ಆಕೆ ಸಾವನ್ನಪ್ಪಿದ್ದಳು. ಆಕೆಯ ಮೇಲೂ ಅತ್ಯಾಚಾರ ಎಸಗಿ ಕೊಲೆ ಮಾಡಲಾಗಿದೆ ಎಂದು ಕುಟುಂಬಸ್ಥರು ಆರೋಪಿಸಿದ್ದರು.

ಈ ಎಲ್ಲಾ ಘಟನೆಗಳು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ಮಹಿಳೆಯರು ಮಕ್ಕಳ ಸುರಕ್ಷತೆ ಕುರಿತಂತೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸುತ್ತಿವೆ. ದರ್ಭಾಂಗಾದ ಈ ಇತ್ತೀಚಿನ ಪ್ರಕರಣದಲ್ಲೂ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ನೀಡಬೇಕು ಎಂಬ ಒತ್ತಾಯ ಸ್ಥಳೀಯರಿಂದ ಹಾಗೂ ನಾಗರಿಕ ಸಮಾಜದಿಂದ ಹೆಚ್ಚಾಗಿದೆ.

ಫೆ.14ರಂದು ನಂದಿಗಿರಿಧಾಮ ಬಂದ್:ಜಿಲ್ಲಾಡಳಿತದ ವಿರುದ್ಧ ಪ್ರೇಮಿಗಳ ಆಕ್ರೋಶ

ಚಿಕ್ಕಬಳ್ಳಾಪುರ: ಫೆಬ್ರವರಿ 14ರಂದು ಆಚರಿಸಲಾಗುವ ಪ್ರೇಮಿಗಳ ದಿನದಂದು ವಿಶ್ವವಿಖ್ಯಾತ ಪ್ರವಾಸಿ ತಾಣವಾದ ನಂದಿಗಿರಿಧಾಮಕ್ಕೆ ಪ್ರವೇಶ ನಿರ್ಬಂಧ ವಿಧಿಸಿರುವ ಚಿಕ್ಕಬಳ್ಳಾಪುರ ಜಿಲ್ಲಾಡಳಿತದ ಕ್ರಮ ಭಾರೀ ವಿವಾದಕ್ಕೆ ಕಾರಣವಾಗಿದೆ. ಇದೇ ಮೊದಲ ಬಾರಿಗೆ ಪ್ರೇಮಿಗಳ ದಿನದಂದು ನಂದಿಗಿರಿಧಾಮಕ್ಕೆ ಸಂಪೂರ್ಣ ಪ್ರವೇಶ ನಿಷೇಧಿಸಲಾಗಿದ್ದು, ಇದರಿಂದಾಗಿ ಪ್ರೇಮಿಗಳು ಹಾಗೂ ಪ್ರವಾಸಿಗರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರೇಮಿಗಳ ದಿನದಂದು ನಂದಿಬೆಟ್ಟಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಯುವಜನರು, ಜೋಡಿಗಳು ಹಾಗೂ ಪ್ರವಾಸಿಗರು ಆಗಮಿಸುವ ಹಿನ್ನೆಲೆ ಇದೆ. ಆದರೆ, ಕಳೆದ ಕೆಲ ವರ್ಷಗಳಲ್ಲಿ ಕೆಲವರು ಅತ್ಯಹತ್ಯೆಗೆ ಯತ್ನಿಸಿರುವ ಘಟನೆಗಳನ್ನು ಉಲ್ಲೇಖಿಸಿ, ಮುಂಜಾಗ್ರತಾ ಕ್ರಮವಾಗಿ ಈ ಬಾರಿ ನಂದಿಗಿರಿಧಾಮ ಪ್ರವೇಶವನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ.

ಜಿಲ್ಲಾಡಳಿತ ಹೊರಡಿಸಿರುವ ಆದೇಶದಂತೆ, ಫೆಬ್ರವರಿ 14ರಂದು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಂದಿಗಿರಿಧಾಮಕ್ಕೆ ಯಾವುದೇ ಪ್ರವಾಸಿಗರು ಪ್ರವೇಶಿಸುವಂತಿಲ್ಲ. ಈ ಅವಧಿಯಲ್ಲಿ ಖಾಸಗಿ ವಾಹನಗಳು, ಪ್ರವಾಸಿ ವಾಹನಗಳು ಸೇರಿದಂತೆ ಯಾವುದೇ ವಾಹನಗಳಿಗೆ ನಂದಿಬೆಟ್ಟದತ್ತ ಹೋಗಲು ಅವಕಾಶ ಇರುವುದಿಲ್ಲ. ಅಲ್ಲದೆ, ಸಾರ್ವಜನಿಕರು, ಜೋಡಿಗಳು ಮಾತ್ರವಲ್ಲದೆ ಸಾಮಾನ್ಯ ಪ್ರವಾಸಿಗರಿಗೂ ಪ್ರವೇಶ ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ.

ಆದರೆ, ಜಿಲ್ಲಾಡಳಿತದ ಈ ಕ್ರಮಕ್ಕೆ ಪ್ರೇಮಿಗಳು ಹಾಗೂ ಯುವಜನರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. "ಸಾಯೋರು ಎಲ್ಲಿದ್ದರೂ ಸಾಯುತ್ತಾರೆ. ಅದಕ್ಕಾಗಿ ಎಲ್ಲರಿಗೂ ನಿರ್ಬಂಧ ಏಕೆ?" ಎಂದು ಪ್ರಶ್ನಿಸುತ್ತಿರುವ ಪ್ರೇಮಿಗಳು, ಇದು ಅನಗತ್ಯ ಹಾಗೂ ಅತಿರೇಕದ ಕ್ರಮ ಎಂದು ಆಕ್ರೋಶ ಹೊರಹಾಕಿದ್ದಾರೆ. ನಂದಿಗಿರಿಧಾಮವು ಪ್ರಾಕೃತಿಕ ಸೌಂದರ್ಯಕ್ಕೆ ಹೆಸರುವಾಸಿಯಾಗಿದ್ದು, ವರ್ಷಪೂರ್ತಿ ಪ್ರವಾಸಿಗರನ್ನು ಆಕರ್ಷಿಸುವ ತಾಣ. ಒಂದು ದಿನದ ನೆಪದಲ್ಲಿ ಸಂಪೂರ್ಣ ಬಂದ್ ಮಾಡುವುದು ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಇನ್ನೊಂದೆಡೆ, ಜಿಲ್ಲಾಡಳಿತ ತನ್ನ ಕ್ರಮವನ್ನು ಸಮರ್ಥಿಸಿಕೊಂಡಿದೆ. ಪ್ರೇಮಿಗಳ ದಿನದಂದು ಹೆಚ್ಚಿನ ಸಂಖ್ಯೆಯಲ್ಲಿ ಯುವಜನರು ಆಗಮಿಸುವ ಕಾರಣ, ಭದ್ರತಾ ದೃಷ್ಟಿಯಿಂದ ಸಮಸ್ಯೆಗಳು ಎದುರಾಗುವ ಸಾಧ್ಯತೆ ಇದೆ. ನಂದಿಬೆಟ್ಟದಂತಹ ಎತ್ತರದ ಪ್ರದೇಶದಲ್ಲಿ ಯಾವುದೇ ಅಹಿತಕರ ಘಟನೆ ನಡೆದರೆ ನಿಯಂತ್ರಣ ಕಷ್ಟಸಾಧ್ಯವಾಗುತ್ತದೆ. ಈ ಹಿನ್ನೆಲೆ ಜನರ ಜೀವ ರಕ್ಷಣೆಯೇ ಮೊದಲ ಆದ್ಯತೆ ಎಂದು ಜಿಲ್ಲಾಧಿಕಾರಿ ಕಚೇರಿ ಮೂಲಗಳು ಹೇಳಿವೆ.

ಹಿಂಧೂ ಸಮಾಜದ ಜಾಗೃತಿಗಾಗಿ; ಶೋಭಾ ಯಾತ್ರೆ ಮತ್ತು ವಿರಾಟ್ ಹಿಂದೂ ಸಮಾಜೋತ್ಸವ

ಪೀಣ್ಯ ದಾಸರಹಳ್ಳಿ: ಹಿಂದೂ ಸಮಾಜೋತ್ಸವದ ಸಂಸ್ಕೃತಿ ರಕ್ಷಣೆ, ಜಾಗೃತಿಗಾಗಿ ದಾಸರಹಳ್ಳಿ ಕ್ಷೇತ್ರದ ಪ್ರತಿ ವಾರ್ಡ್‌ಗಳಲ್ಲಿ ಹಿಂದೂ ಸಮಾಜೋತ್ಸವ ನಡೆಸಲು ನಿರ್ಣಯಿಸಲಾಗಿದೆ. ದಾಸರಹಳ್ಳಿ, ನಾಗಸಂದ್ರ, ಹೆಗ್ಗನಹಳ್ಳಿ, ಅಬ್ಬಿಗೆರೆ, ಲಗ್ಗೆರೆ, ಶೆಟ್ಟಿಹಳ್ಳಿ, ಬಾಗಲಗುಂಟೆ, ಅಬ್ಬಿಗೆರೆ, ಕಮ್ಮಗೊಂಡನಹಳ್ಳಿ, ಹೆಗ್ಗನಹಳ್ಳಿ ಮತ್ತು ಚಿಕ್ಕಸಂದ್ರ ಈ ಪ್ರದೇಶಗಳಲ್ಲಿ ಹಿಂದೂ ಸಮಾಜೋತ್ಸವ ಆಯೋಜನೆ ಆಗಿದೆ' ಎಂದು ಶಾಸಕ ಎಸ್. ಮುನಿರಾಜು ತಿಳಿಸಿದರು.

ಹಾವನೂರು ಬಡಾವಣೆಯ ಹೈಟೆನ್ಷನ್ ಮುಖ್ಯ ರಸ್ತೆಯಲ್ಲಿ ವಿರಾಟ್ ಹಿಂದೂ ಸಮಾಜೋತ್ಸವದ ಶೋಭಾ ಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದರು.

ಸಮಾಜೋತ್ಸವ ಸಮಿತಿಯ ಪ್ರಮುಖರಾದ ಸಿ.ಗಂಗಾಧರ್,' ಬೆಂಗಳೂರು 48 ನಗರ, ದಾಸರಹಳ್ಳಿ ಭಾಗದ 9 ನಗರಗಳಲ್ಲಿ ಹಿಂದೂ ಸಮಾಜೋತ್ಸವಗಳು ನಿಶ್ಚಯ ಆಗಿದೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ 100ನೇ ವರ್ಷದ ಆಚರಣೆಯ ಹಿನ್ನಲೆಯಲ್ಲಿ ಇದು ನಡೆಯುತ್ತಿದೆ'ಎಂದರು.

ವೇದಿಕೆಗೆ ಹೋಗುವ ಮುನ್ನ ಸಾರೋಟಿನಲ್ಲಿ ಭಾರತಾಂಬೆಯ ಭಾವಚಿತ್ರ, ವಿಷ್ಣು ಮತ್ತು ಶ್ರೀರಾಮಚಂದ್ರನ ಕಟೌಟ್ ಮೆರವಣಿಗೆ ಜೊತೆಗೆ ನೂರಾರು ಮಹಿಳೆಯರಿಂದ ಪೂರ್ಣ ಕುಂಭ ಕಳಸ, ಭಜನೆ ಭಕ್ತಿ ಗೀತೆಗಳು, ಮಕ್ಕಳಿಂದ ಮಹಾಪುರುಷರ ವೇಷಭೂಷಣ, ಯಕ್ಷಗಾನ ವೇಷದಾರಿಗಳು ಮತ್ತು ಜಾನಪದದ ಕಲಾ ತಂಡ, ವಾದ್ಯಮೇಳಗಳೊಂದಿಗೆ ಶೋಭಾ ಯಾತ್ರೆಯು ರಾಮಯ್ಯ ಬಡಾವಣೆಯ ಶ್ರೀರಾಮ, ಗಣೇಶ ದೇವಸ್ಥಾನ ದಿಂದ ಹಾವನೂರು ಬಡಾವಣೆಯ ಹೈಟೆನ್ಷನ್ ಮುಖ್ಯರಸ್ತೆವರೆಗೂ ಶೋಭಾ ಯಾತ್ರೆಗೆ ಸುಜಾತಾ ಮುನಿರಾಜು ಚಾಲನೆ ನೀಡಿದರು.

ವೇದಿಕೆಯಲ್ಲಿ ಮಕ್ಕಳಿಂದ ಶಿವರುದ್ರ ತಾಂಡವ ನೃತ್ಯ, ಭರತನಾಟ್ಯ, ಯಕ್ಷಗಾನ ನೃತ್ಯ, ಮೂಕಾಭಿನಯ ಮುಂತಾದ ಸಾಂಸ್ಕೃತಿಕ ಕಾರ್ಯಕ್ರಮದ ಜೊತೆಗೆ ಶ್ರೀ ಸಾಧನ ಮಠ ಚಂದ್ರಶಾನಂದಜಿ ಸ್ವಾಮೀಜಿ, ಹಿಂದೂ ಚಿಂತಕ ಎಚ್.ಎನ್. ಚಂದ್ರಶೇಖರ್, ಸತೀಶ್ ಬಿಜ್ಜಿಹಳ್ಳಿ ಭಾಗವಹಿಸಿ ಪ್ರವಚನ ನೀಡಿದರು.

'ಈ ಸಮಾಜೋತ್ಸವದ ಮೂಲಕ ಪಂಚಪರಿವರ್ತನೆಯ ಕಲ್ಪನೆ ಇಟ್ಟುಕೊಂಡು ಸಮಾಜದಲ್ಲಿ ವ್ಯಾಪಕ ಪರಿವರ್ತನೆ ಆಗಬೇಕೆಂಬುದೇ ಸಂಘಟನೆಯ ಉದ್ದೇಶ. ಹಿಂದೂ ಸಮಾಜ ಜಾಗೃತಿಗೆ ಮಾದರಿಯಾಗಬೇಕು' ಎಂದು ಆಯೋಜಕ ಭರತ್ ಸೌಂದರ್ಯ ತಿಳಿಸಿದರು.

ಸಮಾಜೋತ್ಸವ ಸಮಿತಿಯ ಪ್ರಾಂತ ಅಧಿಕಾರಿ ಬಾಲಕೃಷ್ಣ ಕೆಣಿ, ದಾಸರಹಳ್ಳಿ ಸಮಾಜೋತ್ಸವ ಸಮಿತಿಯ ಅಧ್ಯಕ್ಷ ಮತ್ತು ಕೈಗಾರಿಕೋದ್ಯಮಿ ಅದ ಸುಧೀರ್, ಸಂಯೋಜಕರಾದ ಅನಂತು,ಸೌಂದರ್ಯ ಭರತ್, ಸತ್ಯವೇಲು, ಲಕ್ಷ್ಮಿ ವೆಂಕಟೇಶ್ ಮತ್ತು ಕೃಷ್ಣಮೂರ್ತಿ ಮುಂತಾದವರಿದ್ದರು.

ಉಡುಪಿ ಜಿಲ್ಲೆಯ ಹೆಮ್ಮೆಯ ಗೋಶಾಲೆ ಪ್ರಮೋದ್ ಮಧ್ವರಾಜ್ ಅವರ ಗೋಶಾಲೆ –ಪವನ್ ಕುಮಾರ್ ಶಿರ್ವ ಶ್ಲಾಘನೆ

ಉಡುಪಿ : ಜಿಲ್ಲೆ ಹೆಮ್ಮ